ಅ) *ಹಾಗಿದ್ದಲ್ಲಿ, ಬೆಂಗಳೂರು ಮಹಾನಗರ ಪಾಲಿಕೆಯವರು ಹಸುಗಳನ್ನು ಬೀದಿಯಲ್ಲಿರುವ ವಿದ್ಯುತ್ ಹಾಗೂ ದೂರವಾಣಿ ಕಂಬಗಳಿಗೆ ಕಟ್ಟುವುದನ್ನು ತಡೆಗಟ್ಟಲು ಕ್ರಮ ಕೈಗೊಳ್ಳುವರೆ?*

ಇ) *ಸದರಿ ಬ್ಲಾಕುಗಳ ಮುಂದೆ ಚರಂಡಿಗಳನ್ನು ಸ್ವಚ್ಚಗೊಳಿಸದೆ, ಕಸತೆಗೆಯದೇ ಇರುವುದರಿಂದ ದುರ್ವಾಸನೆಯಿಂದಾಗಿ ನಿವಾಸಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ, ಈ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲಾಗುವುದೇ?*

ಶ್ರೀ ಅನಂತ್‌ನಾಗ್ (ಬೆಂಗಳೂರು ನಗರಾಭಿವೃದ್ಧಿ ರಾಜ್ಯ ಸಚಿವರು) :

ಅ) ಹೌದು.

ಆ) ಈ ರೀತಿ ಹಸುಗಳನ್ನು ಕಟ್ಟದಿರಲು ಅವುಗಳ ಮಾಲೀಕರಿಗೆ ತಿಳಿಸಲಾಗಿದೆ. ಉಲ್ಲಂಘನೆ ಮಾಡಿದವರ ಹಸುಗಳನ್ನು ಹಿಡಿದು ದೊಡ್ಡಿಯಲ್ಲಿ ಕೂಡಿಹಾಕಿ ದಂಡ ವಸೂಲಿ ಮಾಡಲಾಗುತ್ತಿದೆ. ಹಾಗೂ ಎಚ್ಚರಿಕೆ ನೀಡಲಾಗುತ್ತಿದೆ.

ಇ) ಸ್ವಚ್ಛತೆಯನ್ನು ಕಾಪಾಡಿಕೊಂಡು ಬರಲಾಗುತ್ತಿದೆ. ಚರಂಡಿಗಳನ್ನು ಗುಡಿಸಿ ಕಸವನ್ನು ಸಾಗಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಶಾಂತಿನಗರ ವಿಧಾನ ಸಭಾ ಕ್ಷೇತ್ರದಲ್ಲಿ ಹೊಸ ಸಾರ್ವಜನಿಕ ವಿತರಣಾ ಪದ್ಧತಿ ಅನುಷ್ಠಾನ

1802 - ಶ್ರೀಮತಿ ಡಿ.ಜಿ. ಹೇಮಾವತಿ (ಶಾಂತಿನಗರ) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *1997ನೇ ಜೂನ್ ತಿಂಗಳಿನಿಂದ ಪ್ರಾರಂಭವಾದ ಹೊಸ ಸಾರ್ವಜನಿಕ ವಿತರಣಾ ಪದ್ಧತಿಯಡಿಯಲ್ಲಿ ಬೆಂಗಳೂರು ನಗರದಲ್ಲಿ ಎಷ್ಟು ಕುಟುಂಬಗಳು ಸೇರಿವೆ;*

ಆ) *ಈ ಪೈಕಿ ಎಷ್ಟು ಫಲಾನುಭವಿಗಳು ಶಾಂತಿನಗರ ವಿಧಾನಸಭಾ ಕ್ಷೇತ್ರಕ್ಕೆ ಸೇರಿದವರಾಗಿರುತ್ತಾರೆ?*

ಶ್ರೀ ಜಿ. ಬಸವಣ್ಣೆಪ್ಪ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು) :

ಅ) ಬೆಂಗಳೂರು ನಗರದಲ್ಲಿ ಟಿ.ಪಿ.ಡಿ.ಎಸ್. ಯೋಜನೆಯಡಿಯಲ್ಲಿ 1,39,689 ಕುಟುಂಬಗಳು ಸೇರಿವೆ.

ಆ) ಶಾಂತಿನಗರ ವಿಧಾನಸಭಾ ಕ್ಷೇತ್ರದಲ್ಲಿ 5,329 ಕುಟುಂಬಗಳು ಟಿ. ಪಿ.ಡಿ.ಎಸ್. ಯೋಜನೆಯಡಿಯಲ್ಲಿ ಸೇರಿವೆ.

ಬೆಂಗಳೂರಿನ ಶಾಂತಿನಗರ ಕ್ಷೇತ್ರದಲ್ಲಿ ಆಸ್ತಿ ತೆರಿಗೆ.

1803 - ಶ್ರೀಮತಿ ಡಿ.ಜಿ ಹೇಮಾವತಿ (ಶಾಂತಿನಗರ) : ಮಾನ್ಯ ಬೆಂಗಳೂರು ನಗರ ಅಭಿವೃದ್ಧಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಶಾಂತಿನಗರ ವಿಧಾನ ಸಭಾ ಕ್ಷೇತ್ರದಲ್ಲಿ ಆಸ್ತಿ ತೆರಿಗೆ ಪಾವತಿ ಮಾಡುವುದರ ಸಂಖ್ಯೆ ಎಷ್ಟು?*